ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2018–19 ದಿನಾಂಕ: 06–03–2019

## ಪತ್ರಿಕಾ ಪ್ರಕಟಣೆ

# ಮಾರ್ಚ್ 10 ರಂದು ರಾಜ್ಯಾದ್ಯಂತ ಪಲ್ಸ್ ಪೋಲಿಯೊ ಲಸಿಕೆ ಕಾರ್ಯಕ್ರಮ

ಬೆಂಗಳೂರು, ಮಾರ್ಚ್ 6 (ಕರ್ನಾಟಕ ವಾರ್ತೆ)

**ಮಾರ್ಚ್ 10 ರಂದು ರಾಜ್ಯದ 5 ವರ್ಷದೊಳಗಿನ ಎಲ್ಲಾ ಮಕ್ಕಳಿಗೂ ಒಂದೇ ಸುತ್ತಿನ ಪಲ್ಸ್ ಪೋಲಿಯೋ ಲಸಿಕೆ ಹಾಕುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಶಿವಾನಂದ ಪಾಟೀಲ್ ಅವರು ತಿಳಿಸಿದರು.**

**ಅವರು ಇಂದು ವಿಕಾಸಸೌಧದಲ್ಲಿ ಈ ಕುರಿತು ಹಮ್ಮಿಕೊಳ್ಳಲಾದ ಪತ್ರಿಕಾಗೋಷ್ಠಿಯಲ್ಲಿ ಈ ವಿಷಯ ತಿಳಿಸಿದರು.**

**ಪೋಲಿಯೋ ಸೋಂಕು ಮಕ್ಕಳಲ್ಲಿ ತೀವ್ರತರವಾದ ಅಸ್ವಸ್ಥತೆ ಮತ್ತು ಪಾರ್ಶ್ವವಾಯು ಉಂಟುಮಾಡಿ ಸಾವು ಸಂಭವಿಸುವ ಸಾಧ್ಯತೆಯನ್ನು ಹೆಚ್ಚು ಮಾಡುತ್ತವೆ. 2011 ರಲ್ಲಿ ಪಶ್ಚಿಮ ಬಂಗಾಳದಲ್ಲಿ ಪತ್ತೆಯಾದ ಪೋಲಿಯೋ ಭಾರತದ ಕೊನೆಯ ಪ್ರಕರಣ. ಭಾರತಕ್ಕೆ 2014 ರಲ್ಲಿ ಪೋಲಿಯೋ ಮುಕ್ತ ರಾಷ್ಟ್ರ ಎಂಬ ಬಿರುದನ್ನು ವಿಶ್ವ ಆರೋಗ್ಯ ಸಂಸ್ಥೆ ನೀಡಿದೆ. ಇತ್ತೀಚೆಗೆ ಅಫ್ಘಾನಿಸ್ತಾನದಲ್ಲಿ 2 ಹಾಗೂ ಪಾಕಿಸ್ತಾನದಲ್ಲಿ 4 ಪೋಲಿಯೋ ಪ್ರಕರಣಗಳು ಕಂಡು ಬಂದಿರುವ ಹಿನ್ನೆಲಯಲ್ಲಿ ಭಾರತಕ್ಕೆ ಸೋಂಕು ಹರಡುವ ಸಾಧ್ಯತೆ ಇರುವುದರಿಂದ ಮುನ್ನೆಚ್ಚರಿಕಾ ಕ್ರಮವಾಗಿ ಈ ಲಸಿಕಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.**

**ಮಾರ್ಚ್ 10 ರಂದು ನಡೆಯುವ ಈ ಸಾರ್ವತ್ರಿಕ ಲಸಿಕಾ ಕಾರ್ಯಕ್ರಮದಲ್ಲಿ ಎಂದಿನಂತೆ ಪ್ರತಿ ಶಿಶುವಿಗೆ 5 ವರಸೆ ಒಪಿವಿ (ಓರಲ್ ಪೋಲಿಯೋ ವ್ಯಾಕ್ಸೀನ್) ಮತ್ತು 2 ವರಸೆ ಐಪಿವಿ(ಇನ್‌ಜಕ್ಟಬಲ್ ಪೋಲಿಯೋ ವ್ಯಾಕ್ಸೀನ್) ಲಸಿಕೆಗಳನ್ನು ನೀಡಲಾಗುತ್ತಿದೆ. ಯಾವುದೇ ಮಗುವು ಲಸಿಕೆಯಿಂದ ವಂಚಿತವಾಗದಂತೆ ನೋಡಿಕೊಳ್ಳುವ ಗುರಿ ಈ ಕಾರ್ಯಕ್ರಮದ್ದಾಗಿದೆ ಎಂದರು.**

ಈ ರಾಜ್ಯದಲ್ಲಿ ಹಳ್ಳಿ, ಗುಡ್ಡಗಾಡು ಪ್ರದೇಶ, ಇಟ್ಟಿಗೆ ಬಟ್ಟೆ, ಕಾಮಗಾರಿ ವಲಸೆ ಪ್ರದೇಶಗಳು, ರೈಲ್ವೇ ಸ್ಟೇಷನ್, ಮೆಟ್ರೋ ಏರ್‌ಪೋರ್ಟ್ ಆಸ್ಪತ್ರೆಗಳಲ್ಲಿಯೂ ಲಸಿಕೆ ಹಾಕಲು ಕ್ರಮ ವಹಿಸಲಾಗಿದೆ. ಈ ಬಾರಿ **64,85,980** ಐದು ವರ್ಷದೊಳಗಿನ ಮಕ್ಕಳಿಗೆ ಲಸಿಕೆ ಹಾಕುವ ಗುರಿ ಹೊಂದಲಾಗಿದೆ. ಬೂತ್‌ಗಳ ಸಂಖ್ಯೆ **32,571**, ತಂಡಗಳ ಸಂಖ್ಯೆ **51,918**, ಲಸಿಕಾ ಕಾರ್ಯಕರ್ತರು **11,0351**, ಮೇಲ್ವಿಚಾರಕರು **7827**, ಸಂಚಾರಿ ತಂಡ **2481**, ಟ್ರಾನ್ಸಿಲ್ ತಂಡ-**4300** ಇದಕ್ಕಾಗಿ **96** ಲಕ್ಷ ಡೋಸ್ ಪೋಲಿಯೋ ಲಸಿಕೆ, ಮಾರ್ಕರ್ ಪೆನ್ಸ್, ಪೋಸ್ಟರ್ಸ್, ಬ್ಯಾನರ್ಸ್, ರ್‍ಯಾಲಿ ಜಾಥಾ ಇತ್ಯಾದಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಈ ಕಾರ್ಯಕ್ರಮದಲ್ಲಿ ಸಂಪೂರ್ಣ ಯಶಸ್ಸು ಸಾಧಿಸಲು ರಾಜ್ಯ, ಜಿಲ್ಲಾ, ತಾಲ್ಲೂಕು ಮಟ್ಟದ ಎಲ್ಲಾ ಇಲಾಖೆಗಳ ಸಮನ್ವಯ ನಡೆಸಲಾಗುತ್ತಿದೆ. ಇದಲ್ಲದೆ ಕಾರ್ಯಕ್ರಮಕ್ಕೆ ಸಹಕಾರ ಸಂಘ ಸಂಸ್ಥೆಗಳಾದ ವಿಶ್ವ ಆರೋಗ್ಯ ಸಂಸ್ಥೆ, ಯುನಿಸೆಫ್, ರೋಟರಿ, ಐ.ಎಂ.ಎ.ಗಳ ಸಹಕಾರ ಸಹ ಇದೆ ಎಂದರು.

ಈ ಹಿಂದೆ ಮಕ್ಕಳಿಗೆ ಎಷ್ಟು ಬಾರಿ ಪೋಲಿಯೋ ಲಸಿಕೆ ಹಾಕಿಸಿದ್ದರೂ, ಈ ಅಭಿಯಾನದಲ್ಲಿ ಮತ್ತೆ ಲಸಿಕೆ ಹಾಕಿಸುವುದು ಅವಶ್ಯಕವಾಗಿದೆ. ಆದ್ದರಿಂದ ಎಲ್ಲರೂ ಈ ಕಾರ್ಯಕ್ರಮಕ್ಕೆ ಹೆಚ್ಚಿನ ಸಹಕಾರ ನೀಡೋಣ ಎಂದರು.

## ಮಾರ್ಚ್ 8 ರಂದು "ಉದ್ಯೋಗ ಮೇಳ"

ಬೆಂಗಳೂರು, ಮಾರ್ಚ್ 6 (ಕರ್ನಾಟಕ ವಾರ್ತೆ)

ರಾಷ್ಟ್ರೀಯ ವೃತ್ತಿ ಸೇವಾ ಯೋಜನೆ **(NCSP)** ಅಡಿಯಲ್ಲಿ ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆ, ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಗಳು, ಏಪ್ಯಾಟಿಕ್ ಕಟ್ಟಡ, ಎರಡನೇ ಮಹಡಿ, ಕೆಂಪೇಗೌಡ ರಸ್ತೆ, ಬೆಂಗಳೂರು – **560 009** ಹಾಗೂ ಖಾಸಗಿ ನಿಯೋಜಕರುಗಳ ಸಂಯುಕ್ತ ಆಶ್ರಯದಲ್ಲಿ ನಿರುದ್ಯೋಗಿ ಯುವಕ/ಯುವತಿಯರಿಗೆ ನೇರ ಸಂದರ್ಶನಕ್ಕೆ ಅನುಕೂಲವಾಗುವಂತೆ ಮಾರ್ಚ್ **8** ರಂದು ಶುಕ್ರವಾರ ಪೂರ್ವಾಹ್ನ **10.00** ಗಂಟೆಯಿಂದ ಸಂಜೆ **5.00** ಗಂಟೆಯವರೆಗೆ ಬಿ.ಟಿ.ಎಲ್. ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ ಅಂಡ್ ಮ್ಯಾನೇಜ್‌ಮೆಂಟ್ # **259/3**, ಬೊಮ್ಮಸಂದ್ರ ಕೈಗಾರಿಕಾ ಪ್ರದೇಶ, ಹೊಸೂರು ರಸ್ತೆ, ಬೆಂಗಳೂರು – **560 099** ಇಲ್ಲಿ "ಉದ್ಯೋಗ ಮೇಳ' ವನ್ನು ಹಮ್ಮಿಕೊಳ್ಳಲಾಗಿದೆ.

ಈ ಉದ್ಯೋಗ ಮೇಳದಲ್ಲಿ ಖಾಸಗಿ ವಲಯದ 50 ಕ್ಕೂ ಹೆಚ್ಚು ಹೆಸರಾಂತ ಸಂಸ್ಥೆಗಳು ಭಾಗವಹಿಸುತ್ತಿದ್ದು, ವಿವಿಧ ತಾಂತ್ರಿಕ ಹಾಗೂ ತಾಂತ್ರಿಕೇತರ ಹುದ್ದೆಗಳಿಗೆ ಸ್ಥಳದಲ್ಲೇ ನೇರವಾಗಿ ಆಯ್ಕೆ ಮಾಡಲಿದ್ದಾರೆ.

ಅಕ್ಷರಸ್ಥರು, ಅರ್ಧದಲ್ಲಿಯೇ ಶಾಲೆ ಬಿಟ್ಟವರು ಹಾಗೂ ಎಸ್.ಎಸ್.ಎಲ್.ಸಿ. ಫೇಲ್/ ಪಾಸ್, ಪಿ.ಯು.ಸಿ, ಐ.ಟಿ.ಐ. ಡಿಪ್ಲೋಮ (ಎಲ್ಲಾ ಟ್ರೇಡ್‌ಗಳು), ಪದವೀಧರರು ಹಾಗೂ ಸ್ನಾತಕೋತ್ತರ ಪದವಿ ಹೊಂದಿದವರಿಗೆ ಉದ್ಯೋಗ ಅವಕಾಶಗಳು ಲಭ್ಯವಿದೆ. ಉದ್ಯೋಗಕಾಂಕ್ಷಿಗಳು ತಮ್ಮ ವೈಯಕ್ತಿಕ (ಬಯೋಡಾಟಾ) ವಿವರಗಳೊಂದಿಗೆ “ಉದ್ಯೋಗ ಮೇಳ’ ದಲ್ಲಿ ಭಾಗವಹಿಸಿ ಉದ್ಯೋಗ ದೊರೆಯುವ ಸದಾವಕಾಶವನ್ನು ಸದುಪಯೋಗಪಡಿಸಿಕೊಳ್ಳಬಹುದಾಗಿದೆ.

ಹೆಚ್ಚಿನ ಮಾಹಿತಿ ಹಾಗೂ ವಿವರಗಳಿಗಾಗಿ ಈ ಕೆಳಗಿನ ದೂರವಾಣಿ ಸಂಖ್ಯೆ 9036100054 / 9036100064 /9036100065 / 9036100069 ಮೂಲಕ ಸಂಪರ್ಕಿಸಬಹುದಾಗಿದೆ

<u>ಸೂಚನೆಗಳು:</u>

ಅಭ್ಯರ್ಥಿಗಳು ಆಧಾರ ಕಾರ್ಡ್ ಮತ್ತು ಕನಿಷ್ಠ 10 ಬಯೋಡೇಟಾಗಳೊಂದಿಗೆ ಮೇಳಕ್ಕೆ ಹಾಜರಾಗುವುದು.

ಉದ್ಯೋಗ ಮೇಳದಲ್ಲಿ ಭಾಗವಹಿಸಲು ಯಾವುದೇ ಫೀ/ಶುಲ್ಕ ಇರುವುದಿಲ್ಲ. ಸಂಪೂರ್ಣ ಉಚಿತವಾಗಿರುತ್ತದೆ.

ಎನ್.ಸಿ.ಎಸ್. ಪೋರ್ಟಲ್ (www.ncs.gov.in) ನಲ್ಲಿ ನೊಂದಾಯಿಸಿಕೊಳ್ಳಬಹುದು ಎಂದು ಪ್ರಕಟಣೆ ತಿಳಿಸಿದೆ.

## <u>ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ನಿರ್ದೇಶಕರಾಗಿ ಎನ್. ಭೃಂಗೀಶ್</u>

ಬೆಂಗಳೂರು, ಮಾರ್ಚ್ 6 (ಕರ್ನಾಟಕ ವಾರ್ತೆ)

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಜಂಟಿ ನಿರ್ದೇಶಕ ಎನ್. ಭೃಂಗೀಶ್ ಅವರನ್ನು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ನಿರ್ದೇಶಕರ ಹುದ್ದೆಯಲ್ಲಿ ಅಧಿಕ ಪ್ರಭಾರದಲ್ಲಿರಿಸಿ ಆದೇಶ ಹೊರಡಿಸಲಾಗಿದೆ.

ಛಾಯಾಚಿತ್ರ ಇದರೊಂದಿಗೆ ಲಗತ್ತಿಸಿದೆ)

**ಬೆಂಗಳೂರು ಜಲಮಂಡಲಿ : ಮಾರ್ಚ್ 07 ರಂದು ಸಕಾನಿಅ (ಉತ್ತರ-1) ಉಪವಿಭಾಗದಲ್ಲಿ ನೀರಿನ ಅದಾಲತ್**

ಬೆಂಗಳೂರು ಜಲಮಂಡಲಿಯ ದಿನಾಂಕ:07.03.2019 ರಂದು ಸಕಾನಿಅ(ಉತ್ತರ-1) ಉಪವಿಭಾಗದಲ್ಲಿ ನೀರಿನ ಬಿಲ್ಲು, ನೀರು ಮತ್ತು ಒಳಚರಂಡಿ ಸಂಪರ್ಕ ಕಲ್ಪಿಸುವಲ್ಲಿನ ವಿಳಂಬ, ಗೃಹ ಬಳಕೆಯಿಂದ ಗೃಹೇತರ ಬಳಕೆ ಪರಿವರ್ತನೆ ವಿಳಂಬ ಮತ್ತಿತರ ಕುಂದುಕೊರತೆಗಳಿಗೆ ಸಂಬಂಧಿಸಿದಂತೆ ನೀರಿನ ಅದಾಲತ್‌ಅನ್ನು ಬೆಳಗ್ಗೆ 9.30 ರಿಂದ 11:00 ಗಂಟೆಯವರೆಗೆ ನಡೆಸಲಾಗುತ್ತದೆ.

ದಿನಾಂಕ:07.03.2019 ಸಕಾನಿಅ(ಉತ್ತರ-1) ಉಪವಿಭಾಗ ವ್ಯಾಪ್ತಿಗೆ ಬರುವ ಎಂಇಐ ಲೇಔಟ್, ಸೋಲದೇವನ ಹಳ್ಳಿ, ಬಾಹುಬಲಿನಗರ ಸೇವಾಠಾಣೆಗಳಿಗೆ ಸಂಬಂಧಿಸಿದ ವಿವಾದಗಳನ್ನು ನಂ.1, ಎಂಇಐ ಲೇಔಟ್, 7ನೇ ಮುಖ್ಯ ರಸ್ತೆ, ಬೆಂಗಳೂರು-73. ಇಲ್ಲಿನ ಸಕಾನಿಅ(ಉತ್ತರ-1) ಉಪವಿಭಾಗ ಕಚೇರಿಯಲ್ಲಿ ಪರಿಶೀಲಿಸಿ ಬಗೆಹರಿಸಲಾಗುತ್ತದೆ.

ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಬೇಕಾದ ದೂರವಾಣಿ ಸಂಖ್ಯೆ: ಕಾರ್ಯನಿರ್ವಾಹಕ ಅಭಿಯಂತರರು (ವಾಯುವ್ಯ-2): 23311337. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು (ಉತ್ತರ-1) ಉಪವಿಭಾಗ: 28371048.

ಕುಂದು ಕೊರತೆಗಳಿಗೆ ಸಂಬಂಧಿಸಿದಂತೆ ಮಂಡಲಿಯ 24/7 ದೂರುನಿರ್ವಹಣಾ ಕೇಂದ್ರದ ದೂರವಾಣಿ ಸಂಖ್ಯೆ:22238888, ಸಹಾಯವಾಣಿ 1916 ಹಾಗೂ ವಾಟ್ಸ್‌ಆಪ್ ಸಂಖ್ಯೆ:8762228888 ಗೆ ಸಂಪರ್ಕಿಸಬಹುದಾಗಿದೆ.

ಸಾರ್ವಜನಿಕರು ಮೇಲಿನ ಸಮಸ್ಯೆಗಳನ್ನು ಬಗೆಹರಿಸಿಕೊಳ್ಳಲು ಈ ಅದಾಲತ್ ಸೌಲಭ್ಯ ಬಳಸಿಕೊಳ್ಳ ಬಹುದಾಗಿದೆ.

BWSSB: Water Adalat in AEE (North-1) sub division on March 7

BWSSB water Adalat will be held on 07.03.2019 in AEE(North-1) sub division from 9:30.am to 11.00 am to settle the grievances concerned with the water billing, delay in providing water supply & sanitary connections, delay in converting from domestic connection to non domestic connection & other related issues.

The disputes of consumers of MEI Layout, Soladevanahalli, Bhahubalinagar, service station coming under AEE(North-1) sub division, will be discussed in detail & problems will be settled in the office of the Assistant Executive Engineer (North-1) sub division, No.1, MEI layout, 7th Main, Bangalore-73.

Details regarding the adalat can be obtained by the office of EE(North West-2): 23311337, or office of AEE (North-1): 28371048.

For any problems regarding the water supply and all, publics can contact 24x7 call centre: 22238888 helpline number:1916 & whats app no: 8762228888.

Public can utilize this adalat facilities to solve the problems regarding water supply

## Dak Adalat

The Dak Adalat will be held at the office of the Chief Postmaster, Bengaluru GPO, Bengaluru on 22-3-2019 at 11.00 AM. The customers residing in Bengaluru GPO delivery jurisdiction and availing facilities including Savings Bank at Bengaluru GPO may send their grievances and suggestions to Chief Postmaster, Bengaluru GPO so as to reach this office on or before 20-03-2019. The aggrieved members may also attend Dak Adalat in person at the office of the Chief Postmaster, Bengaluru GPO. Contact 080-22850001/22850002 email id cpmbangaloregpo@indiapost.gov.in